# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 487 |
| 2. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3. | ಉತ್ತರಿಸುವ ದಿನಾಂಕ | : | 14.08.2025 |
| 4. | ಉತ್ತರಿಸುವ ಸಚಿವರು | : | ಗೃಹ ಸಚಿವರು. |

| ಕ್ರಮ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಯುವಜನತೆಗೆ ಮದ್ಯ ವ್ಯಸನ ತಡೆಗಟ್ಟಲು ಕೊಪ್ಪಳ ಜಿಲ್ಲೆಯಲ್ಲಿ ಸರ್ಕಾರವು ಯಾವ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ; ಶಾಲಾ-ಕಾಲೇಜುಗಳಲ್ಲಿ ಯಾವ್ಯಾವ ಶೈಕ್ಷಣಿಕ ಅಭಿಯಾನಗಳು ನಡೆದಿವೆ; (ಸಂಪೂರ್ಣ ವಿವರ ಒದಗಿಸುವುದು) | ಕೊಪ್ಪಳ ಜಿಲ್ಲೆಯಲ್ಲಿ ಯುವ ಜನತೆ ಮದ್ಯ ವ್ಯಸನದಿಂದ ಮುಕ್ತರಾಗಲು "ಡ್ರಗ್ಸ್ ಫ್ರೀ ಕೊಪ್ಪಳ" ಹೆಸರಿನಲ್ಲಿ 5 ಕಿ.ಮೀ ಮತ್ತು 10 ಕಿ.ಮೀ ಮ್ಯಾರಾಥಾನ್ ಓಟದ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಅಲ್ಲದೇ ಗಂಗಾವತಿ ನಗರದಲ್ಲಿ ಸೈಕಲ್ ಜಾಥಾ, ಕುಷ್ಟಗಿ ಪಟ್ಟಣದಲ್ಲಿ ಜಾಥಾ ಹಾಗೂ ಅಂತರ ರಾಷ್ಟ್ರೀಯ ಮಾದಕ ವಸ್ತುಗಳ ವಿರೋಧಿ ದಿನಾಚರಣೆ ನಿಮಿತ್ತ ಜಿಲ್ಲೆಯ ಎಲ್ಲಾ ಕಡೆಗಳಲ್ಲಿ ಶಾಲೆ-ಕಾಲೇಜು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಯುವಕರು ಮದ್ಯ ವ್ಯಸನದಿಂದ ದೂರವಿರುವಂತೆ ಬೀದಿ ನಾಟಕಗಳು, ಬಿತ್ತಿ ಪತ್ರಗಳು, ಸ್ಥಳೀಯ ಯುಟ್ಯೂಬ್ ಚಾನೆಲ್‌ಗಳು, ಸಾಮಾಜಿಕ ಜಾಲತಾಣಗಳು ಹಾಗೂ ದಿನಪತ್ರಿಕೆಗಳ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ. |
| (ಆ) | ಕೊಪ್ಪಳ ಮತ್ತು ಗಂಗಾವತಿ ತಾಲ್ಲೂಕುಗಳಲ್ಲಿ ನಿಷಿದ್ಧ ಮದ್ದು (ಡ್ರಗ್ಸ್) ಸಂಬಂಧಿತ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು) | ಕೊಪ್ಪಳ ಮತ್ತು ಗಂಗಾವತಿ ತಾಲ್ಲೂಕುಗಳಲ್ಲಿ ನಿಷಿದ್ಧ ಮದ್ದು ಕುರಿತು ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ. ಡ್ರಗ್ಸ್ ಸಂಬಂಧಿತ ಒಟ್ಟು 42 ಪ್ರಕರಣಗಳು ದಾಖಲಾಗಿರುತ್ತವೆ. |
| (ಇ) | ಕಳೆದ 5 ವರ್ಷಗಳಲ್ಲಿ ದಾಖಲಾದ ಪ್ರಕರಣಗಳು ಹಾಗೂ ಬಂಧಿತ ಆರೋಪಿಗಳ ಸಂಖ್ಯೆ ಎಷ್ಟು; ಮಾದಕ ವಸ್ತುಗಳು ಜಪ್ತಿ ಆಗಿರುವ ಪ್ರಮಾಣ ಹಾಗೂ ಅದರ ಮೌಲ್ಯ ಎಷ್ಟು; (ವಿವರ ಒದಗಿಸುವುದು) | ಕಳೆದ 5 ವರ್ಷಗಳಲ್ಲಿ ದಾಖಲಾದ ಪ್ರಕರಣಗಳು, ಬಂಧಿತ ಆರೋಪಿಗಳ ಸಂಖ್ಯೆ, ಮಾದಕ ವಸ್ತುಗಳು ಜಪ್ತಿ ಆಗಿರುವ ಪ್ರಮಾಣ ಮತ್ತು ಅದರ ಮೌಲ್ಯದ ವಿವರಗಳು ಈ ಕೆಳಕಂಡಂತಿದೆ:- |

| Year | No. of Cases | Accused Arrest | Seized Drugs Quantity | Worth in Rs |
|---|---|---|---|---|
| 2021 | 04 | 04 | 2Kg 869 g | 7,340 |
| 2022 | 04 | 09 | 37 Kg 332 g | 55,400 |
| 2023 | 10 | 22 | 76 Kg 251g | 5,22,100 |
| 2024 | 12 | 14 | 475 g | 24,900 |
| 2025 | 12 | 20 | 1Kg 872 g | 18,09,300 |
| Total | 42 | 69 | 118Kg 799 g | 24,19,040 |

| | | |
|---|---|---|
| (ಈ) | ಮಾದಕವಸ್ತುಗಳ ಹತ್ತಿಕ್ಕಲು ಸರ್ಕಾರದಿಂದ ಏನು ಕ್ರಮ ಕೈಗೊಳ್ಳಲಾಗಿದೆ; ಈ ಮದ್ದು ಜಾಲದ ಹಿಂದೆ ಇರುವ ಪ್ರಮುಖ ಶಂಕಿತರು ಅಥವಾ ಸಂಘಟನೆಗಳ ಬಗ್ಗೆ ತನಿಖೆ ನಡೆಯುತ್ತಿದೆಯೇ; (ವಿವರ ಒದಗಿಸುವುದು) | **ರಾಜ್ಯದಲ್ಲಿ ಮಾದಕ ವಸ್ತುಗಳ ಸೇವನೆ, ಮಾರಾಟವನ್ನು ತಡೆಗಟ್ಟಲು ಸರ್ಕಾರವು ತೆಗೆದುಕೊಂಡ ಕ್ರಮಗಳು ಈ ಕಳಕಂಡಂತಿದೆ:**<br><br>➢ ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ/141/ಪಿಓಪಿ/2025, ದಿನಾಂಕ: 01/08/2025 ರಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಠಾಣೆಗಳಲ್ಲಿ ನಾರ್ಕೋಟಿಕ್ಸ್ ಸಂಬಂಧ ದಾಖಲಾಗುವ ಪ್ರಕರಣಗಳ ಮೇಲ್ವಿಚಾರಣೆಗಾಗಿ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (Anti Narcotic Task Force) ಘಟಕವನ್ನು ಹೆಚ್ಚುವರಿ ಪೊಲೀಸ್ ಅಧೀಕ್ಷಕರು, ಪೊಲೀಸ್ ಉಪಾಧೀಕ್ಷಕರು ಮತ್ತು ಲಿಪಿಕ ಅಧಿಕಾರಿ/ ಸಿಬ್ಬಂದಿಗಳನ್ನೊಳಗೊಂಡ 10 ಹುದ್ದೆಗಳೊಂದಿಗೆ ಸೃಜಿಸಲು ಮತ್ತು ಸದರಿ ಘಟಕಕ್ಕೆ ಅವಶ್ಯವಿರುವ ಒಟ್ಟು 56 ಹುದ್ದೆಗಳನ್ನು ನಕ್ಸಲ್ ನಿಗ್ರಹ ಪಡೆ (Anti Naxal Force) ಘಟಕದಿಂದ ವರ್ಗಾಯಿಸಲು ಹಾಗೂ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (Anti Narcotic Task Force) ಘಟಕವು ಒಟ್ಟಾರೆಯಾಗಿ ಡಿಜಿ ಮತ್ತು ಐಜಿಪಿರವರ ಅಧೀನದಲ್ಲಿ ಕಾರ್ಯನಿರ್ವಹಿಸುವಂತೆ ಮತ್ತು ಡಿ.ಜಿ, ಸೈಬರ್ ಕಮಾಂಡ್‌ರವರಿಗೆ ಕಾರ್ಯವರದಿ ಮಾಡಿಕೊಳ್ಳುವಂತೆ ಆದೇಶಿಸಲಾಗಿರುತ್ತದೆ.<br><br>➢ ಮಾದಕ ಬೆಳೆಗಳ ಗುರುತಿಸುವಿಕೆ ಮತ್ತು ನಾಶ, ಅಕ್ರಮ ಮಾದಕ ವ್ಯಸನವನ್ನು ಪತ್ತೆ ಹಚ್ಚಲು ಮತ್ತು ನಿರ್ಮೂಲನೆ ಮಾಡಲು ರಾಜ್ಯಾದ್ಯಂತ ಪೊಲೀಸ್ ಸಿಬ್ಬಂದಿಗೆ NCB (ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ) ಆನ್‌ಲೈನ್ ಕಾರ್ಯಗಾರಗಳ ಮೂಲಕ ತರಬೇತಿ ನೀಡಲಾಗುತ್ತಿದೆ. ಈ ಉದ್ದೇಶಕ್ಕಾಗಿ NCB ಮೊಬೈಲ್ ಅಪ್ಲಿಕೇಶನ್/ವೆಬ್ ಪೋರ್ಟಲ್ MAPDRUGS ಅನ್ನು ಸಹ ಪರಿಚಯಿಸಲಾಗಿದೆ.<br><br>➢ ಮಾದಕವಸ್ತು ಸಂಬಂಧಿತ ಪ್ರಕರಣಗಳಲ್ಲಿ ರಾಜ್ಯ ಪೊಲೀಸರ ತನಿಖಾ ಸಾಮರ್ಥ್ಯಗಳನ್ನು ಹೆಚ್ಚಿಸಲು NCB ಮತ್ತು ಇತರೆ ಏಜೆನ್ಸಿಗಳ ಸಹಯೋಗದೊಂದಿಗೆ ಆರು ಕಾರ್ಯಾಗಾರಗಳನ್ನು ಆಯೋಜಿಸಲಾಗಿದೆ. ಉಪ ಅಧೀಕ್ಷಕರವರಿಗೆ (ಡಿವೈಎಸ್ಪಿ), ಪೊಲೀಸ್ ನಿರೀಕ್ಷಕರು ಮತ್ತು ಅಬಕಾರಿ ಅಧಿಕಾರಿಗಳಿಗೆ ವಿಶೇಷ ತರಬೇತಿಯನ್ನು ನೀಡಲಾಗಿರುತ್ತದೆ. ಮತ್ತಷ್ಟು ಸಾಮರ್ಥ್ಯ ನಿರ್ಮಾಣ ಕಾರ್ಯಾಗಾರಗಳನ್ನು ಯೋಜಿಸಲಾಗಿದೆ.<br><br>➢ ತರಬೇತಿ ಕಾರ್ಯಕ್ರಮಗಳು:- ಸಿಐಡಿ ಅಧಿಕಾರಿಗಳನ್ನು ಭೋಪಾಲ್ ನಲ್ಲಿರುವ ಸೆಂಟ್ರಲ್ ಅಕಾಡೆಮಿ ಫಾರ್ ಪೊಲೀಸ್ ಟ್ರೈನಿಂಗ್ (ಸಿಎಪಿಟಿ) ತರಬೇತುದಾರರಿಗಾಗಿ ತರಬೇತಿ (TOT) ಹಾಗೂ ಮಾದಕ ದ್ರವ್ಯ ತನಿಖೆಯ ಮೇಲೆ ಕೇಂದ್ರೀಕರಿಸಿದ ಕಾರ್ಯಕ್ರಮಗಳಿಗೆ ಕಳುಹಿಸಲಾಗಿದೆ. NDPS ಕಾಯ್ದೆ (Narcotic Drugs and Psychotropic Substances Act-1985) ಕುರಿತು ಇತರೆ ಸಿಬ್ಬಂದಿಗೆ ಪೊಲೀಸ್ ತರಬೇತಿ ಶಾಲೆಗಳಲ್ಲಿ ಇದೇ ರೀತಿಯ ತರಬೇತಿಯನ್ನು ನೀಡಲಾಗುತ್ತಿದೆ.<br><br>➢ ಮಾದಕ ದ್ರವ್ಯ ಸೇವನೆ, ಮಾರಾಟ, ಸಂಗ್ರಹಣೆ ಮತ್ತು ಸರಬರಾಜು ಮಾಡುವವರ ವಿರುದ್ಧ ಕ್ರಮ ಕೈಗೊಳ್ಳುವ ಸಲುವಾಗಿ ಸಿಐಡಿ ಘಟಕದಲ್ಲಿ ವಿಶೇಷ ತರಬೇತಿ ನೀಡುವ |

ಸೌಲಭ್ಯವನ್ನು ಕಲ್ಪಿಸಲಾಗಿದೆ. ಈಗಾಗಲೇ ರಾಜ್ಯದಲ್ಲಿ 167 ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗಿದೆ.

- NDPS ಪ್ರಕರಣಗಳಲ್ಲಿನ ಆರೋಪಿಗಳ ಮಾಹಿತಿಯನ್ನು ಪೊಲೀಸ್ ಐಟಿ ತಂತ್ರಾಂಶ- National Integrated Database on Arrested Narco Offenders - NIDAAN ಪೋರ್ಟಲ್‌ನಲ್ಲಿ ದಾಖಲಿಸಿ ನಿರ್ವಹಿಸಲಾಗುತ್ತಿದೆ. ಆರೋಪಿಗಳ ದತ್ತಾಂಶ ವಿಶ್ಲೇಷಣೆ ಮಾಡಿ ಆರೋಪಿಗಳ ಚಲನವಲನಗಳ ಮೇಲೆ ನಿಗಾವಹಿಸಲಾಗಿದೆ.

- ಬೆಂಗಳೂರು ಪೊಲೀಸರು ಅಕ್ರಮ ಮಾದಕ ದ್ರವ್ಯ ಚಟುವಟಿಕೆಗಳಲ್ಲಿ ತೊಡಗಿರುವ ವಿದೇಶಿಗರು ವಾಸಿಸುವ ಪ್ರದೇಶಗಳ ಮೇಲೆ ಸೂಕ್ತ ನಿಗಾ ವಹಿಸಿ ಅಕ್ರಮ ಚಟುವಟಿಕೆ ಮೇಲೆ ನಿಯಂತ್ರಣ ಸಾಧಿಸಲಾಗಿದೆ.

- ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ NCORD (Narcotics Co-ordination) ಸಮಿತಿ ರಚನೆಗೊಂಡಿರುತ್ತದೆ. NDPS ಕಾಯ್ದೆ ಜಾರಿಗೊಳಿಸುವ ಸಂಬಂಧ ಇತರೆ ಇಲಾಖೆಯ ಸಮನ್ವಯದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.

- ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಭಾಗಿಯಾಗುವ ವಿದೇಶಿ ಪ್ರಜೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. ಭಾಗಿಯಾಗುವ ಆರೋಪಿಗಳನ್ನು ವಿದೇಶಿ ಪ್ರಜೆಗಳ ಕಾಯ್ದೆ ಅಡಿಯಲ್ಲಿ ಗಡಿಪಾರು ಪ್ರಕ್ರಿಯೆ ಕೈಗೊಳ್ಳಲು ಕ್ರಮ ಜರುಗಿಸಲಾಗುತ್ತಿದೆ.

- PITNDPS-1988ರ ಕಾಯ್ದೆರನ್ವಯ ರಾಜ್ಯದಲ್ಲಿ ಇದುವರೆವಿಗೂ 19 ಆರೋಪಿಗಳ ವಿರುದ್ಧ ನಿಯಾಮಾನುಸಾರ ಬಂಧನ ಕ್ರಮ ಜರುಗಿಸಿ ಮಾನ್ಯ PITNDPS ಸಲಹಾ ಮಂಡಳಿಯ ಮುಂದೆ ಬಂಧಿತ ಆರೋಪಿಯನ್ನು ಹಾಜರುಪಡಿಸಿ, ಮಾನ್ಯ ಸಲಹಾ ಮಂಡಳಿಯ ವರದಿಯನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ.

- ಜೂನ್ 26, 2025 ರಂದು "ಡ್ರಗ್ ದುರುಪಯೋಗ ಮತ್ತು ಅಕ್ರಮ ಸಾಗಣಿಕೆ ವಿರುದ್ಧ ಅಂತರ ರಾಷ್ಟ್ರಿಯ ದಿನಾಚರಣೆ" ಅಂಗವಾಗಿ ಸುಮಾರು 4000 ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ತರಬೇತಿ ಕಾರ್ಯಗಾರ ಆಯೋಜಿಸಿ ತಿಳುವಳಿಕೆ ನೀಡಲಾಗಿದೆ.

- ಈ ಕಾರ್ಯಕ್ರಮದ ಅಂಗವಾಗಿ ವಿಶೇಷ ಕಾರ್ಯ ಕ್ರಮಗಳನ್ನು ರೂಪಿಸಿ ಈ ಕೆಳಕಂಡಂತೆ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಬೋಧನೆ ನೀಡಲಾಗಿದೆ:

| ವರ್ಷ | ಶಾಲಾ-ಕಾಲೇಜುಗಳ ಸಂಖ್ಯೆ | ವಿದ್ಯಾರ್ಥಿಗಳ ಸಂಖ್ಯೆ |
|---|---|---|
| 2023 | 2049 | 3,95,253 |
| 2024 | 3602 | 5,50,000 |

- Drugs Free Karnataka Mobile App ಅನ್ನು ಅಭಿವೃದ್ಧಿಪಡಿಸಿ ಸಾರ್ವಜನಿಕರಲ್ಲಿ ಹಾಗೂ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ, ಮಾದಕವಸ್ತು ಬಳಕೆ, ಸಂಗ್ರಹಣೆ, ಸರಬರಾಜು ಮೇಲೆ ನಿಯಂತ್ರಣ ಸಾಧಿಸುವ ನಿಟ್ಟಿನಲ್ಲಿ ದಿಟ್ಟ ಕ್ರಮಕೈಗೊಳ್ಳಲಾಗುತ್ತಿದೆ.

<table>
<tr><td></td><td></td><td>➢ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ "ಡ್ರಗ್ ಫ್ರೀ ಕರ್ನಾಟಕ ಆ್ಯಪ್" ಜಾರಿಗೆ ತಂದಿರುತ್ತದೆ. ಪ್ಲೇಸ್ಟೋರ್ ನಿಂದ ಡೌನ್ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. ಇದರಲ್ಲಿ ಮಾದಕ ದ್ರವ್ಯಗಳ ಸಾಗಾಣಿಕೆ, ಮಾರಾಟ, ದಾಸ್ತಾನು, ಬೆಳೆ, ಸೇವನೆ, ಅಕ್ರಮ ಲ್ಯಾಬ್‌ಗಳ ಕುರಿತು ಮಾಹಿತಿಯನ್ನು ಇದರಲ್ಲಿ ವರದಿ ಮಾಡಬಹುದಾಗಿರುತ್ತದೆ. ಮಾಹಿತಿದಾರರ ಗೌಪ್ಯತೆ ಕಾಪಾಡಲಾಗುತ್ತಿದೆ. ಆ್ಯಪ್ ನಲ್ಲಿ ವರದಿಯಾಗುವ ಮಾಹಿತಿಯನ್ನು ಆಧರಿಸಿ ಕಾನೂನು ಕ್ರಮ ಜರುಗಿಸಲಾಗುತ್ತಿದೆ.</td></tr>
<tr><td>(ಉ)</td><td>ಇದುವರೆಗೆ ಎಷ್ಟು ಪ್ರಕರಣಗಳನ್ನು ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಸಲಾಗಿದೆ; (ವಿವರ ಒದಗಿಸುವುದು)</td><td>ಕಳೆದ ಐದು ವರ್ಷದಲ್ಲಿ ಇದುವರೆಗೆ ದಾಖಲಾದ ಒಟ್ಟು 42 ಪ್ರಕರಣಗಳಲ್ಲಿ 34 ಪ್ರಕರಣಗಳಿಗೆ ನ್ಯಾಯಾಲಯದಲ್ಲಿ ಚಾರ್ಜ ಶೀಟ್ ಸಲ್ಲಿಸಲಾಗಿದೆ. ವಿವರ ಈ ಕೆಳಕಂಡಂತಿದೆ:-
<table>
<tr><th>Sl. No.</th><th>Year</th><th>No. of Cases</th><th>Charge sheet Submit to Court</th><th>Case Under investigation</th></tr>
<tr><td>1</td><td>2021</td><td>04</td><td>04</td><td>00</td></tr>
<tr><td>2</td><td>2022</td><td>04</td><td>04</td><td>00</td></tr>
<tr><td>3</td><td>2023</td><td>10</td><td>10</td><td>00</td></tr>
<tr><td>4</td><td>2024</td><td>12</td><td>12</td><td>00</td></tr>
<tr><td>5</td><td>2025</td><td>12</td><td>04</td><td>08</td></tr>
<tr><td></td><td>Total</td><td>42</td><td>34</td><td>08</td></tr>
</table></td></tr>
<tr><td>(ಊ)</td><td>ಡ್ರಗ್ಸ್ ವ್ಯವಹಾರಕ್ಕೆ ಸಹಕಾರ ನೀಡಿದ ಅಥವಾ ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆಯೇ? (ವಿವರ ಒದಗಿಸುವುದು)</td><td>ಕೊಪ್ಪಳ ಜಿಲ್ಲೆಯಲ್ಲಿ ಡ್ರಗ್ಸ್ ವ್ಯವಹಾರಕ್ಕೆ ಸಹಕಾರ ನೀಡಿರುವ ಅಥವಾ ನಿರ್ಲಕ್ಷ ವಹಿಸಿರುವ ಬಗ್ಗೆ ಯಾವುದೇ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಾಗಿರುವುದಿಲ್ಲ.</td></tr>
</table>

ಒಇ 44 ಪಿಎನ್‌ಡಿ 2025 (ಇ)

(ಡಾ: ಜಿ . ಪರಮೇಶ್ವರ)
ಗೃಹ ಸಚಿವರು